# ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ (MPLADS)

## ಇದೀಗ ಸುದ್ದಿಯಲ್ಲಿದೆ:

- ಇತ್ತೀಚಿಗೆ, MPLADS ನಿಧಿಯ ದುರುಪಯೋಗದ ಆರೋಪದ ಕುರಿತು ವಿವಾದ ಉದ್ಭವಿಸಿದ್ದು, ವಿಮರ್ಶಕರು ಈ ಯೋಜನೆಯನ್ನು ಸ್ಥಗಿತಗೊಳಿಸಬೇಕೆಂದು ಒತ್ತಾಯಿಸುತ್ತಿದ್ದಾರೆ.

## ಯೋಜನೆಯ ಬಗ್ಗೆ:

- ಇದು 1993 ರಲ್ಲಿ ಪ್ರಾರಂಭವಾದ ಒಂದು **ಕೇಂದ್ರ ವಲಯದ ಯೋಜನೆಯಾಗಿದೆ.**
- ಅನುಷ್ಠಾನ ಸಚಿವಾಲಯ:- **ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವಾಲಯವು** (MoSPI).
- ಉದ್ದೇಶ:- **ಕುಡಿಯುವ ನೀರು, ನೈರ್ಮಲ್ಯ, ರಸ್ತೆಗಳು ಮತ್ತು ಸಾರ್ವಜನಿಕ ಆರೋಗ್ಯ ಮೂಲಸೌಕರ್ಯಗಳಂತಹ ಸ್ಥಳೀಯ ಅಗತ್ಯಗಳನ್ನು ಆಧರಿಸಿ, ಬಾಳಿಕೆ ಬರುವ ಸಮುದಾಯ ಆಸ್ತಿಗಳನ್ನು ನಿರ್ಮಿಸುವ ಕಾಮಗಾರಿಗಳಿಗೆ ಶಿಫಾರಸು ಮಾಡಲು ಸಂಸದರಿಗೆ (MPs) ಅವಕಾಶ** ಕಲ್ಪಿಸುವುದು.

## ಪ್ರಮುಖ ನಿಬಂಧನೆ ಮತ್ತು ಹಂಚಿಕೆ

- ವರ್ಷಕ್ಕೆ 5 ಕೋಟಿ ರೂ. ಹಂಚಿಕೆ ಮಾಡಲಾದ ನಿಧಿ:- **ಪ್ರತಿಯೊಬ್ಬ ಸಂಸದರು** MPLADS ಅಡಿಯಲ್ಲಿ ಪಡೆಯಲು ಅರ್ಹರಾಗಿರುತ್ತಾರೆ
- **ಅಸ್ತಿತ್ವದಲ್ಲಿರುವ ಅಭಿವೃದ್ಧಿ ಯೋಜನೆಗಳಿಗೆ ಪೂರಕವಾಗಿ ಮತ್ತು ಸ್ಥಳೀಯ ಕೊರತೆಗಳನ್ನು ನೀಗಿಸಲು** ಈ ನಿಧಿಯನ್ನು ಬಳಸಲಾಗುತ್ತದೆ.
- ಸಂಸದರು ವಾರ್ಷಿಕವಾಗಿ ಕನಿಷ್ಠ **15% ರಷ್ಟು ನಿಧಿಯನ್ನು ಪರಿಶಿಷ್ಟ ಜಾತಿ (SC) ವಾಸಿಸುವ ಪ್ರದೇಶಗಳಿಗೆ ಮತ್ತು 7.5% ರಷ್ಟು ನಿಧಿಯನ್ನು ಪರಿಶಿಷ್ಟ ಪಂಗಡ (ST) ವಾಸಿಸುವ ಪ್ರದೇಶಗಳಿಗೆ ಶಿಫಾರಸು ಮಾಡುವುದು ಕಡ್ಡಾಯವಾಗಿದೆ.**
- ಲೋಪವಾಗದ ನಿಧಿ:- MPLADS ನಿಧಿಗಳು ಲೋಪವಾಗುವುದಿಲ್ಲ/ರದ್ದಾಗುವುದಿಲ್ಲ, ಅಂದರೆ **ಬಳಕೆಯಾಗದ ಹಣವನ್ನು ಮುಂದಿನ ವರ್ಷಗಳಿಗೆ ವರ್ಗಾಯಿಸಲಾಗುತ್ತದೆ ಮತ್ತು ಇದು ಯೋಜನೆಗಳ ಮುಂದುವರಿಕೆಯನ್ನು ಖಚಿತಪಡಿಸುತ್ತದೆ.**

## ಭೌಗೋಳಿಕ ವ್ಯಾಪ್ತಿ:-

- ಲೋಕಸಭೆಯ ಸಂಸದರು **ತಮ್ಮ ಮತ ಕ್ಷೇತ್ರಗಳಲ್ಲಿ,** ಕಾಮಗಾರಿಗಳನ್ನು ಶಿಫಾರಸು ಮಾಡಬಹುದು.
- ರಾಜ್ಯಸಭೆಯ ಸಂಸದರು **ತಾವು ಆಯ್ಕೆಯಾದ ರಾಜ್ಯದೊಳಗೆ** ಕಾಮಗಾರಿಗಳನ್ನು ಶಿಫಾರಸು ಮಾಡಬಹುದು.
- ನಾಮನಿರ್ದೇಶಿತ ಸಂಸದರು **ದೇಶದ ಯಾವುದೇ ಭಾಗದಲ್ಲಿ** ಕಾಮಗಾರಿಗಳನ್ನು ಶಿಫಾರಸು ಮಾಡಬಹುದು.

### ವಿನಾಯಿತಿಗಳು:-

- ಸಂಸದರು ತಮ್ಮ **ಮತ ಕ್ಷೇತ್ರ ಅಥವಾ ರಾಜ್ಯದ ಹೊರಗೆ ವರ್ಷಕ್ಕೆ ₹ 25 ಲಕ್ಷ ರೂ.ಗಳವರೆಗೆ**
- **ನೈಸರ್ಗಿಕ ವಿಕೋಪಗಳ ಸಂದರ್ಭದಲ್ಲಿ ಪೀಡಿತ ಜಿಲ್ಲೆಗೆ ₹ 1 ಕೋಟಿ ರೂ.ಗಳವರೆಗೆ** ಕಾಮಗಾರಿಗಳನ್ನು ಶಿಫಾರಸು ಮಾಡಬಹುದು.